ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜೂನ್ 2, 2020**

# ಪತ್ರಿಕಾ ಪ್ರಕಟಣೆ

## ಮುಖ್ಯಮಂತ್ರಿಗಳಿಂದ ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲನೆ

**ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):**

ಮುಖ್ಯಮಂತ್ರಿ ಬಿ. ಎಸ್ ಯಡಿಯೂರಪ್ಪ ಅವರು ಇಂದು ಕೃಷಿ ಹಾಗೂ ತೋಟಗಾರಿಕೆ ಇಲಾಖೆಗಳ ಪ್ರಗತಿ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ಮೆಕ್ಕೆ ಜೋಳ ಹಾಗೂ ಹೂವು ಬೆಳೆಗಾರರಿಗೆ 666 ಕೋಟಿ ರೂ.ಗಳ ಪರಿಹಾರ ಮೊತ್ತವನ್ನು ರೈತರ ಖಾತೆಗೆ ಆನ್‌ಲೈನ್ ಮೂಲಕ ಬಿಡುಗಡೆ ಮಾಡಿ, ರೈತರಿಗೆ ಕರೆ ಮಾಡಿ ಹಣ ವರ್ಗಾವಣೆ ಆಗಿರುವುದನ್ನು ಖಾತ್ರಿಪಡಿಸಿಕೊಂಡರು ಹಾಗೂ ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳ 100 ದಿನಗಳ ಪ್ರಗತಿಯ ವರದಿಯನ್ನು ಬಿಡುಗಡೆ ಮಾಡಿದರು. ಕೃಷಿ ಸಚಿವ ಬಿ.ಸಿ. ಪಾಟೀಲ್, ತೋಟಗಾರಿಕೆ ಹಾಗೂ ರೇಷ್ಮೆ ಸಚಿವ ಕೆ. ನಾರಾಯಣ ಸ್ವಾಮಿ, ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ, ಅಭಿವೃದ್ಧಿ ಆಯುಕ್ತೆ ವಂದಿತಾ ಶರ್ಮಾ ಉಪಸ್ಥಿತರಿದ್ದರು.

## ಕೋವಿಡ್–19 ನಿಯಂತ್ರಣಕ್ಕೆ ಮುಖ್ಯಮಂತ್ರಿಗಳಿಂದ ವಿಡಿಯೋ ಸಂವಾದ

**ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):**

ಕೋವಿಡ್–19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಇಂದು ಕಲಬುರಗಿ, ವಿಜಯಪುರ, ಉಡುಪಿ, ಯಾದಗಿರಿ, ರಾಯಚೂರು, ಬೆಳಗಾವಿ ಮತ್ತು ಬೀದರ್ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಪೋಲಿಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿದರು.

ಗೃಹ ಸಚಿವ ಬಸವರಾಜ ಬೊಮ್ಮಾಯಿ, ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್, ಅಭಿವೃದ್ಧಿ ಆಯುಕ್ತೆ ವಂದಿತಾ ಶರ್ಮಾ, ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಜಾವೇದ್ ಅಖ್ತರ್, ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಪೋಲೀಸ್ ಮಹಾ ನಿರ್ದೇಶಕ ಪ್ರವೀಣ್ ಸೂದ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸಚಿವಾಲಯದಲ್ಲಿ ಕಡ್ಡಾಯವಾಗಿ "ಇ-ಆಫೀಸ್" ಮೂಲಕ ಕಡತ ನಿರ್ವಹಣೆ

**ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):**

ಸಚಿವಾಲಯದ ಎಲ್ಲಾ ಕಛೇರಿಗಳಲ್ಲಿ ದಿನಾಂಕ ಜೂನ್ 1, 2020 ರಿಂದ ಜಾರಿಗೆ ಬರುವಂತೆ "ಇ-ಆಫೀಸ್" ಅನ್ನು ಅನುಷ್ಟಾನಗೊಳಿಸಲಾಗಿದೆ. ಅದೇ ರೀತಿ 'ಇ-ಆಫೀಸ್" ತಂತ್ರಾಶವನ್ನು ಬಳಸಿ ದಿನಾಂಕ:01.11.2019 ರಿಂದ ಜಾರಿಗೆ ಬರುವಂತೆ ನನ್ನ ಕಚೇರಿಯಿಂದ ಸಚಿವಾಲಯದ ಎಲ್ಲಾ ಇಲಾಖೆಗಳು/ಅಧೀನ ಸಂಸ್ಥೆಗಳಿಗೆ "ಇ-ಆಫೀಸ್" ಮೂಲಕವೇ ವ್ಯವಹರಿಸಲಾಗುತ್ತಿದೆ.

ರಾಜ್ಯ ಮಟ್ಟದ ಎಲ್ಲಾ ಇಲಾಖೆಗಳ ಮುಖ್ಯಸ್ಥರ ಕಚೇರಿ/ ಎಲ್ಲಾ ಪ್ರಾದೇಶಿಕ ಆಯುಕ್ತರ ಕಚೇರಿ/ ಜಿಲ್ಲಾಧಿಕಾರಿಗಳ / ಜಿಲ್ಲಾ ಪಂಚಾಯತ್ / ಪೋಲೀಸ್ ವರಿಷ್ಠಾಧಿಕಾರಿಗಳ / ಉಪ ಅರಣ್ಯ ಸಂರಕ್ಷಣಾಧಿಕಾರಿ (ಪ್ರಾದೇಶಿಕ) ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ (ಸಾಮಾಜಿಕ)ಗಳ ಕಚೇರಿಗಳಲ್ಲಿ ಜೂನ್ 1 ರಿಂದ ಜಾರಿಗೆ ಬರುವಂತೆ "ಇ-ಅಫೀಸ್" ಅನ್ನು ಜಾರಿಗೆ ತರಲಾಗಿದೆ.

ಕೊರೋನಾ ಸೋಂಕು ದಿನದಿಂದ ದಿನ ಏರಿಕೆಯಾಗುತ್ತಿರುವುದರಿಂದ ಇನ್ನು ಮುಂದೆ ಕಡತಗಳನ್ನು ಭೌತಿಕ ರೂಪದಲ್ಲಿ ಸಲ್ಲಿಸುವ ಬದಲಾಗಿ ನನ್ನ ಕಚೇರಿಗೆ ಇ-ಅಫೀಸ್" ಮೂಲಕ ಮಾತ್ರ ಕಡತ ಮತ್ತು ಪತ್ರಗಳನ್ನು ಸಲ್ಲಿಸಬೇಕು ಹಾಗೂ ಎಲ್ಲಾ ಸಚಿವರು ನಿಮ್ಮ ಕಚೇರಿಗಳಲ್ಲಿ "ಇ-ಆಫೀಸ್" ತಂತ್ರಾಶವನ್ನು ಅನುಷ್ಠಾನಗೊಳಿಸಿ ಎಲ್ಲ ಕಡತ ಹಾಗೂ ಪತ್ರಗಳ ಈ ತಂತ್ರಾಂಶದ ಮೂಲಕ ನಿರ್ವಹಿಸಲು ಅಗತ್ಯ ಕ್ರಮ ವಹಿಸುವಂತೆ ಮುಖ್ಯಮಂತ್ರಿಗಳು ಎಲ್ಲಾ ಸಚಿವರುಗಳು ಮತ್ತು ಮುಖ್ಯ ಕಾರ್ಯದರ್ಶಿಗಳು ಸೂಚನೆ ನೀಡಿದ್ದಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರು ಜೂನ್ 4 ಮತ್ತು 5 ರಂದು ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಜೂನ್ 5 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಸಚಿವರ ಪ್ರವಾಸ

ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):

ಕಂದಾಯ ಸಚಿವ ಆರ್. ಅಶೋಕ್ ಅವರು ಜೂನ್ 3 ಮತ್ತು 4 ರಂದು ರಾಮನಗರ, ಚಾಮರಾಜನಗರ ಹಾಗೂ ಕೊಡಗು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಜೂನ್ 4 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಜಿಲ್ಲಾ ಉಸ್ತುವಾರಿ ಸಚಿವರ ನೇಮಕ

ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):

ಜಲಸಂಪನ್ಮೂಲ (ಬೃಹತ್ ಮತ್ತು ಮಧ್ಯಮ ನೀರಾವರಿ) ಸಚಿವ ರಮೇಶ್ ಲಕ್ಷ್ಮಣರಾವ್ ಜಾರಕಿಹೊಳಿ ಅವರಿಗೆ ಬೆಳಗಾವಿ ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಲಾಗಿದೆ.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವ ಕೆ. ಗೋಪಾಲಯ್ಯ ಅವರಿಗೆ ಹಾಸನ ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿ ನೇಮಕ ಮಾಡಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ರಕ್ತದಾನ ಶಿಬಿರ

ಬೆಂಗಳೂರು, ಜೂನ್ 2, 2020 (ಕರ್ನಾಟಕ ವಾರ್ತೆ):

ರಾಜ್ಯದಲ್ಲಿ ಕೋವಿಡ್-19 (COVID-19) ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದೆಲ್ಲೆಡೆ ಲಾಕ್‌ಡೌನ್‌ಇದ್ದು ಅನೇಕ ರೋಗಿಗಳಿಗೆ ರಕ್ತದ ಅವಶ್ಯಕತೆ ಇದೆ.ರಕ್ತದ ಅಭಾವ ಉಂಟಾಗಿರುವ ಈ ಸಂದರ್ಭದಲ್ಲಿ ಕೆ.ಪಿ.ಟಿ.ಸಿ.ಎಲ್. ಹಾಗೂ ಬೆಸ್ಕಾಂ,ಕೇಂದ್ರ ಕಛೇರಿಗಳು ರೆಡ್‌ಕ್ರಾಸ್ ಸಂಸ್ಥೆಯು ಸಹಯೋಗದೊಂದಿಗೆ ಅಧಿಕಾರಿ/ನೌಕರ ವರ್ಗದವರಿಂದ ಕವಿಪ್ರನಿನಿಯು ಮೊದಲನೇ ಹಂತದ ರಕ್ತದಾನ ಶಿಬಿರವನ್ನು ಏರ್ಪಡಿಸಿತ್ತು. ಈ ಶಿಬಿರದಲ್ಲಿ ಸುಮಾರು 220 ಜನ ರಕ್ತದಾನ ಮಾಡಿದ್ದರು. ಇಂದು ಬೆಂಗಳೂರಿನ ಕೆಪಿಟಿಸಿಎಲ್ ಲೆಕ್ಕಾಧಿಕಾರಿಗಳ ಸಂಘದ ಸಭಾಂಗಣದಲ್ಲಿ, ಎರಡನೇ ಹಂತದ ರಕ್ತದಾನ ಶಿಬಿರವನ್ನು ಏರ್ಪಡಿಸಲಾಯಿತು.150ಕ್ಕೂ ಹೆಚ್ಚಿನ ರಕ್ತದಾನಿಗಳು ಭಾಗವಹಿಸಿದ್ದರು. ವಿಶೇಷವಾಗಿ ಕೆಪಿಟಿಸಿಎಲ್. ವ್ಯವಸ್ಥಾಪಕ ನಿರ್ದೇಶಕರಾದ ಡಾ॥ ಮಂಜುಳರವರು ಶಿಬಿರವನ್ನು ಉದ್ಘಾಟಿಸಿದ್ದರು. ಶಿಬಿರವನ್ನು ಯಶಸ್ವಿಗೊಳಿಸುವಲ್ಲಿ ಜಿ.ಎಂ.ಗಂಗಾಧರಸ್ವಾಮಿ, ನಿರ್ದೇಶಕರು (ಆಡಳಿತ & ಮಾ.ಸಂ.), ಕವಿಪ್ರನಿನಿ, ಕೆಪಿಟಿಸಿಎಲ್ ನೌಕರರ ಅಧ್ಯಕ್ಷಟಿ.ಆರ್.ರಾಮಕೃಷ್ಣಯ್ಯ, ಕೆಪಿಟಿಸಿಎಲ್/ಬೆಸ್ಕಾಂನ ಅಧಿಕಾರಿಗಳು ಹಾಗೂ ಕನ್ನಡ ಸಂಘದ ಪದಾಧಿಕಾರಿಗಳು ಕೈಜೋಡಿಸಿದರು.

ಕೆಪಿಟಿಸಿಎಲ್/ಬೆಸ್ಕಾಂನ ಎಲ್ಲಾ ವರ್ಗದ ಆಸಕ್ತ ರಕ್ತದಾನಿಗಳು ಸ್ವಪ್ರೇರಣೆಯಿಂದ ಭಾಗವಹಿಸಿದರು. ವಿಶೇಷವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪವರ್ ಮ್ಯಾನ್‌ಗಳು ಭಾಗವಹಿಸಿದರು.

ಈ ಸಂದರ್ಭದಲ್ಲಿ ಕವಿಪ್ರನಿನಿ ವ್ಯವಸ್ಥಾಪಕ ನಿರ್ದೇಶಕರು ಮಾತನಾಡಿ, ಸರಕಾರದ ಆದೇಶದಂತೆ, ರಕ್ತದಕೊರತೆ ಇರುವ ಗರ್ಭಿಣಿಯರು, ಮಕ್ಕಳು, ಮತ್ತು ಇತರ ರೋಗಿಗಳಿಗೆ ಈ ಶಿಬಿರ ಅನುಕೂಲವಾಗಲಿದೆ. ಮುಂದಿನ ದಿನದಲ್ಲಿ ಜಿಲ್ಲೆಗಳಲ್ಲೂ ಆಯೋಜಿಸಲಾಗುವುದು ಎಂದರು. ನಾವು ಸರಕಾರದ ಆದೇಶದಂತೆ ಅತ್ಯಂತ ಕಡಿಮೆ ಅವಧಿಯಲ್ಲಿ ಈ ಶಿಬಿರವನ್ನ ಯಶಸ್ವಿಯಾಗಿ ಆಯೋಜಿಸಿದ್ದು ಹೆಮ್ಮೆ ಅನಿಸಿದೆ. ಇತರರಿಗೆ ಪ್ರೇರಣೆಯಾಗಲೆಂದು ಕಳೆದ ಬಾರಿ ನಾನೇ ಸ್ವತಹ ಮೊದಲಿಗೆ ರಕ್ತದಾನ ಮಾಡಿದೆ. ಮುಂದಿನ ದಿನದಲ್ಲಿ ನಾವು ಈಗ ಕೊಟ್ಟಿರುವ ರಕ್ತದಾನಿಗಳ ಸಂಖ್ಯೆಯು ಮೂರು ಪಟ್ಟು ರಕ್ತದಾನಿಗಳಿಂದ ರಕ್ತದಾನ ಶಿಬಿರಗಳನ್ನು ನಮ್ಮ ಇಲಾಖೆಯು ಎಲ್ಲಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಜಿಲ್ಲಾವಾರು ಆಯೋಜಿಸುತ್ತೇವೆ. ಈ ಮೂಲಕ ನಾವು ಜನಜಾಗೃತಿಗೊಳಿಸಿದಂತಾಗುತ್ತದೆ. ಇದೇರೀತಿ ಹೆಚ್ಚಿನ ಸಂಖ್ಯೆಯಲ್ಲಿ ಎಲ್ಲರೂ ರಕ್ತದಾನಕ್ಕೆ ಮುಂದಾದರೆ ನೂರಾರು ಅಮೂಲ್ಯ ಜೀವವನ್ನು ರಕ್ಷಿಸಬಹುದು. ವಿಶೇಷವಾಗಿ ಪ್ರಸಕ್ತ ಕೋವಿಡ್-19 ಸಂದರ್ಭದಲ್ಲಿ ಸಾಮಾಜಿಕ ಅಂತರದ ನಡುವೆ ರೆಡ್‌ಕ್ರಾಸ್ ಸಹಯೋಗದಲ್ಲಿ ಈ ಶಿಬಿರವನ್ನು ಆಯೋಜಿಸಿದ್ದೇವೆ ಎಂದು ತಿಳಿಸಿದರು.